**Bangalore**
**Regional News**
**23.05.2025 / 2.30 P.M.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಕೇಂದ್ರ ಸಚಿವ ಮನೋಹರ್ ಲಾಲ್ ಕಟ್ಟರ್ ಅವರನ್ನು ಭೇಟಿಯಾದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್; ಬೆಂಗಳೂರು ಅಭಿವೃದ್ಧಿ ಕುರಿತು ಚರ್ಚೆ
2. ಇಸ್ರೋ ದಿಂದ ಇದುವರೆಗೂ ೭ ಸಾವಿರದ ೧೦೦ ಬಾಹ್ಯಾಕಾಶ ಮಿಷನ್ ಪರೀಕ್ಷೆ ಪೂರ್ಣ
3. ಪರಿಶಿಷ್ಟ ಜಾತಿ ಗಣತಿ ಕಾರ್ಯ; ದಾವಣಗೆರೆಯಲ್ಲಿ ಶೇಕಡ ೧೦೦ ರಷ್ಟು ಪ್ರಗತಿ
4. ಮನ್ ಕಿ ಬಾತ್ ; ಇದೇ ೨೫ ರಂದು ದೇಶ-ವಿದೇಶದ ಭಾರತೀಯರೊಂದಿಗೆ ಪ್ರಧಾನಿ ಮನದ ಮಾತು

<><><>

ಕೇಂದ್ರ ಸಚಿವ ಮನೋಹರ್ ಲಾಲ್ ಖಟ್ಟರ್ ಅವರನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರಿನಲ್ಲಿ ಇಂದು ಭೇಟಿ ಮಾಡಿ ಬೆಂಗಳೂರು ಅಭಿವೃದ್ಧಿ ಯೋಜನೆಗಳಿಗೆ ಕೇಂದ್ರದ ಸಹಕಾರ ಕುರಿತು ಸಮಾಲೋಚನೆ ನಡೆಸಿದರು. ಈ ಸಂದರ್ಭದಲ್ಲಿ ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ ರಾವ್, ಬಿಎಂಆರ್‌ಡಿಎ ಆಯುಕ್ತ, ಉಪಮುಖ್ಯಮಂತ್ರಿಗಳ ಕಾರ್ಯದರ್ಶಿ ರಾಜೇಂದ್ರ ಚೋಳನ್ ಉಪಸ್ಥಿತರಿದ್ದರು.

<><><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋ ಇದುವರೆಗೂ ೭ ಸಾವಿರದ ೧೦೦ ಬಾಹ್ಯಾಕಾಶ ಮಿಷನ್ ಪರೀಕ್ಷೆಗಳನ್ನು ಪೂರ್ಣಗೊಳಿಸಿದೆ ಮತ್ತು ಇನ್ನೂ ೩ ಸಾವಿರ ಪರೀಕ್ಷೆಗಳು ಬಾಕಿ ಉಳಿದಿವೆ ಎಂದು ಇಸ್ರೋ ಮುಖ್ಯಸ್ಥ ವಿ. ನಾರಾಯಣನ್ ತಿಳಿಸಿದ್ದಾರೆ. ೨೦೨೫ ಅನ್ನು ಗಗನ ಯಾನ ವರ್ಷವೆಂದು ಘೋಷಿಸಿಸಲಾಗಿದೆ. ೨೦೨೫ರಲ್ಲಿ ಹಲವಾರು ಕಾರ್ಯಾಚರಣೆಗಳನ್ನು ಯೋಜಿಸಲಾಗಿದೆ. ಇದರಲ್ಲಿ ನಾಸಾ-ಇಸ್ರೋ, ಸಿಂಥೇಟಿಕ್ ಅಪರ್ಚರ್ ರಾಡಾರ್ ಉಪಗ್ರಹವೂ ಸೇರಿದೆ. ಇದನ್ನು ಭಾರತದ ಸ್ವಂತ ಉಡಾವಣಾ ವಾಹನದಿಂದ ಉಡಾಯಿಸಲಾಗುವುದು ಎಂದು ಅವರು ಮಾಹಿತಿ ನೀಡಿದ್ದಾರೆ. ೨೦೨೫ರ ಡಿಸೆಂಬರ್ ವೇಳೆಗೆ, ವ್ಯೋಮಮಿತ್ರ ಎಂದು ಕರೆಯಲ್ಪಡುವ ಮೊದಲ ಸಿಬ್ಬಂದಿ ಇಲ್ಲದ ಬಾಹ್ಯಾಕಾಶ ಮಿಷನ್ ಮತ್ತು ನಂತರ ಎರಡು ಸಿಬ್ಬಂದಿ ಇಲ್ಲದ ಮಿಷನ್‌ಗಳನ್ನು ಇಸ್ರೋ ಉಡಾವಣೆ ಮಾಡಲಿದೆ ಎಂದು ಇಸ್ರೋ ಮುಖ್ಯಸ್ಥರು ತಿಳಿಸಿದ್ದಾರೆ.

<><><>

ಕಳೆದ ವರ್ಷ ಅಂಕೋಲಾ ತಾಲೂಕಿನ ಶಿರೂರು ಗ್ರಾಮದ ರಾಷ್ಟ್ರೀಯ ಹೆದ್ದಾರಿ-೬೬ ರಲ್ಲಿ ಭಾರಿ ಗುಡ್ಡ ಕುಸಿತ ಉಂಟಾಗಿ, ದುರ್ಘಟನೆ ಸಂಭವಿಸಿದ ಹಿನ್ನೆಲೆಯಲ್ಲಿ ಈ ಸ್ಥಳವನ್ನು ಭೂಕುಸಿತ ಸೂಕ್ಷ್ಮ ಪ್ರದೇಶ ಎಂದು ಪ್ರತಿಬಂಧಕಾಜ್ಞೆ ಹೊರಡಿಸಿ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಆದೇಶಿಸಿದ್ದಾರೆ. ಈ ವರ್ಷ ಸಹ ಗುಡ್ಡದ ಕೆಲವು ಭಾಗಗಳಲ್ಲಿ ಮಣ್ಣು ಸಡಿಲಗೊಂಡು, ನೆಲಕ್ಕೆ ಉರುಳುತ್ತಿರುವುದು ಕಂಡುಬಂದಿದೆ. ಈ ಪ್ರದೇಶದಲ್ಲಿ ಭೂಕುಸಿತ ಉಂಟಾಗುವ ಎಲ್ಲಾ ಸಾಧ್ಯತೆಗಳು ಇವೆ. ಈಗಾಗಲೇ ಮುಂಗಾರು ಪೂರ್ವ ಮಳೆ ಪ್ರಾರಂಭಗೊಂಡಿದ್ದು, ಅಲ್ಲದೇ ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಣೆ ಮಾಡಿರುವುದರಿಂದ ಶಿರೂರು ರಾಷ್ಟ್ರೀಯ ಹೆದ್ದಾರಿ-೬೬ ಪ್ರದೇಶ ಹಾಗೂ ಅದರ ಮುಂಭಾಗದಲ್ಲಿ ಇರುವ ಗಂಗಾವಳಿ ನದಿಯ ವ್ಯಾಪ್ತಿಯನ್ನು ಅಪಾಯಕಾರಿ ವಲಯವೆಂದು ವಿಪತ್ತು ನಿರ್ವಹಣಾ ಕಾಯ್ದೆ ೨೦೦೫ರ ಅಡಿಯಲ್ಲಿ ಘೋಷಿಸಲಾಗಿದೆ. ಈ ಭಾಗದ ಗಂಗಾವಳಿ ನದಿಯಲ್ಲಿ ಮೀನುಗಾರಿಕೆ ಅಥವಾ ಸಾರ್ವಜನಿಕರು ನದಿಗೆ ಇಳಿಯುವುದು, ಸ್ಥಳದಲ್ಲಿ ವಾಹನಗಳನ್ನು ನಿಲ್ಲಿಸುವುದು, ಸ್ಥಳದಲ್ಲಿ ನಿಂತು ಭಾವಚಿತ್ರಗಳನ್ನು ತೆಗೆಯವುದು ಹಾಗೂ ಇತರೆ ಚಟುವಟಿಕೆಗಳನ್ನು ಮಳೆಗಾಲ ಮುಗಿಯುವವರೆಗೆ ನಿರ್ಬಂಧಿಸಿ, ಪ್ರತಿಬಂಧಕಾಜ್ಞೆ ಹೊರಡಿಸಿ ಜಿಲ್ಲಾಧಿಕಾರಿ ಆದೇಶಿಸಿದ್ದಾರೆ.

<><><>

ದಾವಣಗೆರೆ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಗಣತಿ ಕಾರ್ಯದಲ್ಲಿ ಶೇಕಡ ೧೦೦ ರಷ್ಟು ಸಾಧನೆ ಮಾಡಲಾಗಿದೆ. ಈ ಮೂಲಕ ರಾಜ್ಯದಲ್ಲಿಯೇ ಶೇಕಡ ೧೦೦ ರಷ್ಟು ಸಾಧನೆ ಮಾಡಿದ ಹೆಗ್ಗಳಿಕೆಗೆ ಜಿಲ್ಲೆ ಪಾತ್ರವಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ದಾವಣಗೆರೆ ಜಿಲ್ಲಾಡಳಿತ ಭವನದಲ್ಲಿಂದು ಈ ಕುರಿತು ಮಾಹಿತಿ ನೀಡಿದ ಅವರು, ೨೦೧೧ರ ಜನಗಣತಿ ಪ್ರಕಾರ ಜಿಲ್ಲೆಯಲ್ಲಿ ಜನಸಂಖ್ಯೆ ೩ ಲಕ್ಷದ ೧೮ ಸಾವಿರದ ೩೧೫ ಇತ್ತು. ಈಗ ಜನಗಣತಿ ಮಾಡಿದ ಸಂದರ್ಭದಲ್ಲಿ ೩ ಲಕ್ಷ ೨೯ ಸಾವಿರದ ೬೪ ಜನಸಂಖ್ಯೆ ಇರುವುದು ಗೊತ್ತಾಗಿದೆ. ಕುಟುಂಬಗಳ ಸಂಖ್ಯೆ ಹೆಚ್ಚಾಗಿರುವುದರಿಂದ ಪ್ರತಿಶತ ಹೆಚ್ಚು ಕಂಡು ಬಂದಿದೆ ಎಂದು ವಿವರಿಸಿದರು. ಇದೇ ೨೫ರವರೆಗೆ ಗಣತಿದಾರರ ಮನೆ ಮನೆ ಭೇಟಿ ಕಾರ್ಯಕ್ರಮ ಇತ್ತು. ಈಗಾಗಲೇ ಎಲ್ಲ ಗಣತಿದಾರರು ಈ ಕಾರ್ಯ ಪೂರ್ಣಗೊಳಿಸಿದ್ದು, ಇದಾದ ನಂತರ ಇದೇ ೨೬ ರಿಂದ ೨೮ ರ ವರೆಗೆ ಮತಗಟ್ಟೆಗಳಲ್ಲಿ ವಿಶೇಷ ಶಿಬಿರ ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ತಿಳಿಸಿದರು.

<><><>

ಕೋಲಾರ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿಯ ಒಳ ಮೀಸಲಾತಿ ಸಮೀಕ್ಷೆಯು ಕೊನೆಯ ಹಂತದಲ್ಲಿದ್ದು, ಸಮುದಾಯದವರು ಸರ್ಕಾರ ಕೇಳಿರುವ ಮಾಹಿತಿಯನ್ನು ಆನ್‌ಲೈನ್ ಮತ್ತು ವಿಶೇಷ ಶಿಬಿರಗಳಲ್ಲಿ ನೀಡಿ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಎಂ ಆರ್. ರವಿ ಮನವಿ ಮಾಡಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ ಒಟ್ಟು ಅಂದಾಜು ೩ ಲಕ್ಷದ ೫೩ ಸಾವಿರದ ೮೦೬ ಕುಟುಂಬಗಳಿದ್ದು, ಅದರಲ್ಲಿ ೩ ಲಕ್ಷದ ೪೨ ಸಾವಿರದ ೧೫೬ ಕುಟುಂಬಗಳ ಸಮೀಕ್ಷೆ ಪೂರ್ಣಗೊಂಡಿದ್ದು, ಶೇಕಡ ೯೬.೭೧ ರಷ್ಟು ಪ್ರಗತಿ ಸಾಧಿಸಲಾಗಿದೆ. ಪರಿಶಿಷ್ಟ ಜಾತಿಯ ಒಟ್ಟು ೧ ಲಕ್ಷದ ೧೦ ಸಾವಿರದ ೨೭೩ ಕುಟುಂಬಗಳಿದ್ದು, ಆ ಪೈಕಿ ೯೮ ಸಾವಿರದ ೭೫೩ ಕುಟುಂಬಗಳು ಸಮೀಕ್ಷೆಗೆ ಒಳಪಟ್ಟಿದ್ದು, ಶೇಕಡ ೮೯.೫೫ ರಷ್ಟು ಸಮೀಕ್ಷೆ ಪೂರ್ಣಗೊಂಡಿದೆ ಎಂದು ವಿವರಿಸಿದರು. ಕೋಲಾರ, ಕೆಜಿಎಫ್, ಬಂಗಾರಪೇಟೆ ತಾಲೂಕುಗಳಲ್ಲಿ ಇನ್ನಷ್ಟು ಕುಟುಂಬಗಳ ಸಮೀಕ್ಷೆ ಬಾಕಿ ಉಳಿದಿದ್ದು, ಮುಂದಿನ ಎರಡು ದಿನಗಳಲ್ಲಿ ಮನೆ-ಮನೆಗೆ ಭೇಟಿ ನೀಡಿ ಸಮೀಕ್ಷೆ ಪೂರ್ಣಗೊಳಿಸಲು, ಎಲ್ಲಾ ಮೇಲ್ವಿಚಾರಕರಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

<><><>

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಇದೇ ತಿಂಗಳ ೨೫ ರಂದು ಆಕಾಶವಾಣಿಯ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ದೇಶ-ವಿದೇಶಗಳ ಭಾರತೀಯರೊಂದಿಗೆ ತಮ್ಮ ಆಲೋಚನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಆಕಾಶವಾಣಿಯ ಮನ್ ಕಿ ಬಾತ್ ನ ೧೨೨ ನೇ ಸಂಚಿಕೆಯಾಗಲಿದೆ. ಟೋಲ್-ಫ್ರೀ ಸಂಖ್ಯೆ ೧೮೦೦-೧೧-೭೮೦೦ ಮೂಲಕ ಮನದ ಮಾತಿನ ಸಂಚಿಕೆಗೆ ಜನರು ತಮ್ಮ ಆಲೋಚನೆ, ಸಲಹೆಗಳನ್ನು ಸಲ್ಲಿಸಬಹುದು. ನರೇಂದ್ರ ಮೋದಿ ಅಪ್ಲಿಕೇಶನ್ ಅಥವಾ ಮೈ ಜಿಒವಿ ಓಪನ್ ಫೋರಂ ಮೂಲಕ ಆನ್‌ಲೈನ್‌ನಲ್ಲಿ ಜನರು ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಬಹುದು. ಸಲಹೆಗಳನ್ನು ಸ್ವೀಕರಿಸಲು ಇಂದು ಕೊನೆಯ ದಿನವಾಗಿದೆ.

<><><>

ಇಂದು ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ವ್ಯಾಪಕವಾಗಿ ಮಳೆಯಾಗಿದೆ. ಪ್ರಮುಖವಾಗಿ ಕುಮುಟಾ ಮತ್ತು ಅಂಕೋಲಾದಲ್ಲಿ ತಲಾ ೮ ಸೆಂಟಿ ಮೀಟರ್ ಮಳೆಯಾಗಿದೆ. ಇಂದಿನಿಂದ ಇದೇ ೨೭ ರವರೆಗೆ ಕರಾವಳಿ ಹಾಗೂ ಒಳನಾಡಿನಲ್ಲಿ ವ್ಯಾಪಕವಾಗಿ ಮಳೆಯಾಗುವ ಸಾಧ್ಯತೆಯಿದೆ. ದಕ್ಷಿಣ ಒಳನಾಡಿನಲ್ಲಿ ಬಹುತೇಕ ಎಲ್ಲ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಂಭವವಿದೆ. ಬೆಂಗಳೂರಿನಲ್ಲಿ ಕೆಲವು ಕಡೆ ಹಗುರ ಮಳೆಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆಯ ನಿರ್ದೇಶಕ ಸಿ.ಎಸ್. ಪಾಟೀಲ್ ತಿಳಿಸಿದ್ದಾರೆ.

ಧ್ವನಿ : ಸಿ.ಎಸ್. ಪಾಟೀಲ್ (೩೪ ಸೆಕೆಂಡ್‌ಗಳು)

<><><>

ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯ ಬಹುತೇಕ ಕಡೆ ಮಳೆ ಮುಂದುವರೆದಿದೆ. ಬೆಳಗ್ಗಿನಂದಲೇ ಸುರಿಯುತ್ತಿರುವ ಮಳೆಯಿಂದ ಅನೇಕ ಕಡೆ ಮರಗಳು ಉರುಳಿಬಿದ್ದಿವೆ. ಜಿಲ್ಲೆಯಲ್ಲಿ ಕಳೆದ ೪-೫ ದಿನಗಳಿಂದ ಉತ್ತಮ ಮಳೆ ಬೀಳುತ್ತಿದ್ದರೂ ಹೋಲಿಕೆಯಲ್ಲಿ ಕಳೆದ ವರ್ಷಕ್ಕಿಂತ ಕಡಮೆ ಮಳೆಯಾಗಿದೆ. ಜನವರಿಯಿಂದ ಈವರೆಗೆ ಕೊಡಗಿನಲ್ಲಿ ಕಳೆದ ವಷ ೨೫೦ ಮಿಲಿ ಮೀಟರ್ ಮಳೆ

ಬಿದ್ದಿದ್ದರೆ, ಈ ವರ್ಷ ೨೧೮ ಮಿಲಿಮೀಟರ್ ಮಳೆಯಾಗಿದೆ. ಮಡಿಕೇರಿ ಮತ್ತು ವಿರಾಜಪೇಟೆ ತಾಲೂಕುಗಳಲ್ಲಿ ಹೆಚ್ಚಿನ ಮಳೆಯಾಗಿದ್ದರೆ, ಸೋಮವಾರಪೇಟೆ ತಾಲೂಕಿನಲ್ಲಿ ಕಡಮೆ ಮಳೆಯಾಗಿದೆ. ಮುಂದಿನ ವಾರ ಕೇರಳದ ಮೂಲಕ ಕೊಡಗು ಜಿಲ್ಲೆಗೆ ಮುಂಗಾರು ಪ್ರವೇಶಿಸುವ ನಿರೀಕ್ಷೆಯಿದ್ದು, ಈ ವರ್ಷ ಮುಂಗಾರು ಪೂರ್ವ ಮಳೆಯು ಮೇ ತಿಂಗಳಿನಲ್ಲಿಯೇ ಪ್ರಾರಂಭವಾಗಿದೆ.

<><><>

ಚಿಕ್ಕಮಗಳೂರು ನಗರದ ಜಿಲ್ಲಾ ಆಸ್ಪತ್ರೆಯಲ್ಲಿ ಸುಮರು ೭೫ ಲಕ್ಷ ರೂಪಾಯಿ ವೆಚ್ಚದಲ್ಲಿ ಸ್ತನ ಕ್ಯಾನ್ಸರ್ ಪತ್ತೆಗೆ ಮ್ಯಾಮೋಗ್ರಾಫಿ ಸ್ಕ್ರಿನಿಂಗ್ ಯಂತ್ರವನ್ನು ಅಳವಡಿಸಲಾಗಿದೆ ಎಂದು ಶಾಸಕ ಹೆಚ್.ಡಿ ತಮ್ಮಯ್ಯ ತಿಳಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲಾಸ್ಪತ್ರೆಗೆ ಭೇಟಿ ನೀಡಿ ನೂತನವಾಗಿ ಅಳವಡಿಸಲಾಗಿರುವ ಯಂತ್ರೋಪಕರಣಗಳನ್ನು ಪರಿಶೀಲನೆ ನಡೆಸಿದ ಬಳಿಕ ಮಾತನಾಡಿದ ಅವರು,  ಈ ಯಂತ್ರ ಈಗಾಗಲೇ ಕಾರ್ಯಾರಂಭ ಆರಂಭಿಸಿದ್ದು, ಮಹಿಳೆಯರ ಸ್ತನ ಕ್ಯಾನ್ಸ್‌ರ್ ಪತ್ತೆಗೆ ಅನುಕೂಲವಾಗಿದೆ ಎಂದರು.  ಈ ಮೊದಲು ಜಿಲ್ಲೆಯ ಜನರು ಇದಕ್ಕಾಗಿ ಶಿವಮೊಗ್ಗ ಅಥವಾ ಹಾಸನ ಜಿಲ್ಲಾಸ್ಪತ್ರೆಗೆ ತೆರಳಬೇಕಿತ್ತು. ಈಗ ಚಿಕ್ಕಮಗಳೂರಿನಲ್ಲಿಯೇ ರೋಗ ಪತ್ತೆಗೆ ಯಂತ್ರ ಆಳವಡಿಸಲಾಗಿದೆ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಹೇಳಿದರು.

<><><>

ಯಾದಗಿರಿ ಜಿಲ್ಲೆಯಲ್ಲಿನ ಡೆಂಘಿ ಪ್ರದೇಶಗಳನ್ನು ಗುರುತಿಸಿ, ಸೂಕ್ತ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಯಾದಗಿರಿ ಹೆಚ್ಚುವರಿ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ.  ಯಾದಗಿರಿ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಡೆಂಘಿ ದಿನಾಚರಣೆ ಸಮನ್ವಯ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಡೆಂಘಿ ಜ್ವರವು ಅಧಿಸೂಚಿತ ರೋಗಗಳ ವ್ಯಾಪ್ತಿಗೆ ಒಳಪಡುವುದರಿಂದ ಎಲ್ಲ ಖಾಸಗಿ ಆಸ್ಪತ್ರೆಗಳು, ಇನ್ನಿತರ ಖಾಸಗಿ ಕ್ಲಿನಿಕ್, ನರ್ಸಿಂಗ್ ಹೋಮ್‌ಗಳು ತಮ್ಮಲ್ಲಿ ವರದಿಯಾಗಿರುವ ಡೆಂಘಿ ಪ್ರಕರಣಗಳ ಮಾಹಿತಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ವರದಿ ಮಾಡಬೇಕು ಎಂದು ನಿರ್ದೇಶಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>